# ಅಬಕಾರಿ ಇಲಾಖೆ: ಜಪ್ತಿಪಡಿಸಿದ ವಿವರ

ಬೆಳಗಾವಿ.ಏ.–: ಲೋಕಸಭಾ ಚುನಾವಣೆ ಹಿನ್ನೇಲೆಯಲ್ಲಿ ನೀತಿ ಸಂಹಿತೆ ಜಾರಿಯಾದಾಗಿನಂದ ಬೆಳಗಾವಿ ಉತ್ತರ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಅಬಕಾರಿ ಅಧಿಕಾರಿಗಳಿಂದ 34 ದ್ವಿ–ಚಕ್ರ ವಾಹನ, 4 ಕಾರ್ ಹಾಗೂ 2 ಹೆವಿ ವಾಹನಗಳನ್ನು ಸೇರಿ 1,65,68,191 ಮೌಲ್ಯದ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಚುನಾವಣಾ ಆಯೋಗವು ನೀತಿ ಸಂಹಿತೆಯನ್ನು ಮಾ.16 ರಿಂದ ಜಾರಿಯಾದಗಿನಂದ ಏ.19 ವರೆಗೆ ಅಬಕಾರಿ ಉಪ ಆಯುಕ್ತರ ಕಚೇರಿಯು ಬೆಳಗಾವಿ ಉತ್ತರ ಜಿಲ್ಲೆ ಚಿಕ್ಕೋಡಿ ಜಿಲ್ಲಾ ವ್ಯಾಪ್ತಿಯಲ್ಲಿ ಅಬಕಾರಿ ಇಲಾಖೆಯು ಲೋಕಸಭಾ ಚುನಾವಣೆ–2024 ನಿಮಿತ್ಯ ಅಬಕಾರಿ ಅಕ್ರಮಗಳನ್ನು ತಡೆಗಟ್ಟಲು ಅಬಕಾರಿ ಅಧಿಕಾರಿಗಳು ದಾಳಿ, ಗಸ್ತು ಹಾಗೂ ರಸ್ತೆಗಾವಲುಗಳನ್ನು ಕೈಗೊಂಡು 57–ಘೋರ, 49–ಸಾಮಾನ್ಯ ಹಾಗೂ 362–15(ಎ) ಹೀಗೆ ಒಟ್ಟು 468 ಮೊಕದ್ದಮೆಗಳನ್ನು ದಾಖಲಿಸಿ 570 ಆರೋಪಿಗಳನ್ನು ದಸ್ತಗಿರಿ ಮಾಡಲಾಗಿರುತ್ತದೆ.

18516.000 ಲೀಟರ್ ಭಾರತೀಯ ಮದ್ಯ, 73.000 ಲೀಟರ್ ಹೊರ ರಾಜ್ಯದ ಮದ್ಯ, 153 ಲೀಟರ್ ಶೇಂದಿ, 330 ಲೀಟರ್ ಕಳ್ಳಭಟ್ಟಿ ಸಾರಾಯಿ, 83.4 ಲೀಟರ್ ಬಿಯರ್ ಹಾಗೂ 34 ದ್ವಿ–ಚಕ್ರ ವಾಹನ, 4 ಕಾರ್ ಹಾಗೂ 2 ಹೆವಿ ವಾಹನಗಳನ್ನು ವಶಪಡಿಸಿಕೊಳ್ಳಲಾಗಿರುತ್ತದೆ. ಅಬಕಾರಿ ಪದಾರ್ಥಗಳ ಮತ್ತು ವಾಹನಗಳ ಮೌಲ್ಯವು 1,65,68,191 ಆಗಿರುತ್ತದೆ ಎಂದು ಬೆಳಗಾವಿ ಉತ್ತರ ಜಿಲ್ಲೆಯ ಚಿಕ್ಕೋಡಿ ತಾಲೂಕಿನ ಡೆಪ್ಯೂಟಿ ಕಮೀಷನರ್ ಆಫ್ ಎಕ್ಸೈಜ್ ಆಫೀಸ್‌ರಾದ ಪ್ರಶಾಂತಕುಮಾರ. ಕೆ ಅವರು ಪ್ರಕರಣದಲ್ಲಿ ತಿಳಿಸಿದ್ದಾರೆ.

# ಏ.21 ರಂದು ಭಗವಾನ್ ಮಹಾವೀರ ಜಯಂತಿ ಆಚರಣೆ

ಬೆಳಗಾವಿ.ಏ–: ಲೋಕಸಭೆ ಚುನಾವಣೆ–2024ರ ಪ್ರಯುಕ್ತ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಏ.21 ರಂದು ಭಗವಾನ್ ಮಹಾವೀರ ಜಯಂತಿ ಸರಳವಾಗಿ ಹಾಗೂ ಸಾಂಕೇತಿಕವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿಗ ಕಚೇರಿಯಲ್ಲಿ ನಡೆದ ಭಗವಾನ್ ಮಹಾವೀರ ಜಯಂತಿಯ ಪೂರ್ವ ಸಿದ್ಧತೆ ಸಭೆಯಲ್ಲಿ ತಿರ್ಮಾನಿಸಲಾಯಿತು.




ಬೆಳಗಾವಿ: ಅಖಿಲ ಕರ್ನಾಟಕ ಜಂಗಮ ಸಮಾಜ ಹಾಗೂ ಹಿಂದೂಪರ ಸಂಘಟನೆಗಳ ವತಿಯಿಂದ ಇಂದು ಮತಾಂತರದ ದುಷ್ಕೃತ್ಯಕ್ಕೆ ಬಲಿಯಾದ ಹುಬ್ಬಳ್ಳಿಯ ನೇಹಾ ಹಿರೇಮಠ ಕೊಲೆಗಡುಕ ಫಯಾಜ ಧರ್ಮಾಂಧನಗೆ ಅತ್ಯುಗ್ರ ಶಿಕ್ಷೆಯಾಗುವಂತೆ ಆಗ್ರಹಿಸಿ ಪ್ರತಿಭಟನೆ ಮಾಡಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು. ಅಷ್ಟೇ ಅಲ್ಲದೆ ಹತ್ಯೆಯಾಗಿರುವ ಹೆಣ್ಣುಮಗಳ ಬಗ್ಗೆ ಹಗುರವಾದ ಮಾತುಗಳಿಂದ ಚಾರಿತ್ರ್ಯ ವಧೆ ಮಾಡಲು ಪ್ರಯತ್ನಿಸಿ ಕ್ಷುಲ್ಲಕ ರಾಜಕಾರಣ ಮಾಡುತ್ತಿರುವ ರಾಜ್ಯದ ಮುಖ್ಯಮಂತ್ರಿ ಹಾಗೂ ಗೃಹ ಸಚಿವರ ನಡೆಯನ್ನು ಖಂಡಿಸಿ ರಾಜ್ಯ ಸರ್ಕಾರಕ್ಕೆ ದಿಕ್ಕಾರ ಕೂಗಿದರು, ನೇಹಾಳ ಆತ್ಮಕ್ಕೆ ಚಿರಶಾಂತಿ ಕೋರಲಾಯಿತು.

# ನೇಹಾ ಹಿರೇಮಠ ಕೊಲೆಗೈದ ಆರೋಪಿಗೆ ಗಲ್ಲುಶಿಕ್ಷೆ ನೀಡಲು ಆಗ್ರಹಿಸಿ ವಿವಿಧ ಸಂಘಟನೆಗಳಿಂದ ಬೃಹತ್ ಪ್ರತಿಭಟನೆ




ಗದಗ: ನಗರದ ಅಖಿಲ ಭಾರತ ಜಂಗಮ ಸೇವಾ ಸಮಿತಿ, ವೀರಶೈವ ಮಹಾಸಭಾ, ಪ್ರಜಾ ಪರಿವರ್ತನಾ ವೇದಿಕೆ, ಕ್ರಾಂತಿ ಸೇನೆ, ವೀರ ಮದಕರಿ ಸೇನೆ, ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘಟನೆ ಹಾಗೂ ವಿವಿಧ ಹಿಂದೂಪರ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ನೇಹಾ ಹಿರೇಮಠರನ್ನು ಹತ್ಯೆಗೈದ ಆರೋಪಿ ಫಯಾಜ್‌ನನ್ನ ಗಲ್ಲಿಗೆ ಏರಿಸುವಂತೆ ಆಗ್ರಹಿಸಿ ಶನಿವಾರ ಮುಳಗುಂದ ನಾಕಾದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಹಾಗೂ ಮುಖ್ಯಮಂತ್ರಿ ಸಿದ್ಧರಾಮಯ್ಯನವರಿಗೆ ಮನವಿ ಸಲ್ಲಿಸಲಾಯಿತು.

ಇದಕ್ಕೂ ಮುನ್ನ ನಗರದ ಮುಳಗುಂದ ನಾಕಾದಲ್ಲಿ ಮಾನವ ಸರಪಳಿ ನಿರ್ಮಿಸಿ ಕೆಲಕಾಲ ರಸ್ತೆತಡೆ ನಡೆಸಿ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು. ಪ್ರತಿಭಟನೆಯುದ್ಧಕ್ಕೂ ಆರೋಪಿಗೆ ಗಲ್ಲು ಶಿಕ್ಷೆ ನೀಡಿ ನ್ಯಾಯ ದೊರಕಿಸಿಕೊಡಿ ಎಂಬ ಘೋಷವ್ಯಾಕ್ಯಗಳು ಕೇಳಿ ಬಂದವು.

ಈ ಸಂದರ್ಭದಲ್ಲಿ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಬಸವರಾಜ ಕೊರ್ಲಹಳ್ಳಿ ಅವರು ಮಾತನಾಡಿ, ಯಾವುದೇ ಸಮಾಜದ ಹೆಣ್ಣುಮಕ್ಕಳಿಗೂ ಈ ರೀತಿ ಅನ್ಯಾಯವಾಗಬಾರದು ಕಾರಣ ದೇಶದ ಕಾನೂನು ಬಿಗಿಯಾಗಬೇಕು ಎಂದರು. ಕ್ರಾಂತಿ ಸೇನೆ ಜಿಲ್ಲಾಧ್ಯಕ್ಷ ಬಾಬು ಬಾಕಳೆ ಮಾತನಾಡಿ, ಸರ್ಕಾರ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟ ಅನಿವಾರ್ಯ ಎಂದರು. ಜಂಗಮ ಸಮಾಜದ ಮುಖಂಡ ವಿ.ಕೆ.ಗುರುಮಠ ಮಾತನಾಡಿ, ವಿವಿಧ ಸಮುದಾಯಗಳನ್ನು ಒಂದುಗೂಡಿಸಿ ಮುಂಬರುವ ದಿನಮಾನದಲ್ಲಿ ಯಾರಿಗೂ ಅನ್ಯಾಯವಾಗದಂತೆ ಸಂಸ್ಕಾರ–ಸಂಸ್ಕೃತಿ ನೀಡಬೇಕಾಗಿದೆ ಎಂದರು.

ಈ ಸಂದರ್ಭದಲ್ಲಿ ಸೇನಾ ನಿವೃತ್ತಿ ಹೊಂದಿದ ಯೋದ ರಾಜು ಹುಲಕೋಟಿ ಆಕ್ರೋಶಭರಿತ ನುಡಿಗಳ ಮೂಲಕ ನಾವೆಲ್ಲ ಒಂದಾಗದಿದ್ದರೆ ಈ ಅನ್ಯಾಯ ನಿರಂತರವಾಗಲಿದೆ ಎಂದರು. ಅಖಿಲ ಭಾರತ ಜಂಗಮ ಸೇವಾ ಸಮಿತಿ ಅಧ್ಯಕ್ಷ ಪ್ರಭಯ್ಯ ದಂಡಾವತಿಮಠ, ಕ್ರಾಂತಿಸೇನೆಯ ಮಹಿಳಾಧ್ಯಕ್ಷೆ ರಾಣಿ ಚಂದಾವರಿ ಹಾಗೂ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಬಸಲಿಂಗಪ್ಪ ಮಾತನಾಡಿದರು, ವಿ. ಬಿ. ಹಿರೇಮಠ ಮೇಮೊರಿಯಲ್ ಟ್ರಸ್ಟ್‌ನ ವಿ.ವಿ.ಹಿರೇಮಠ, ಸಂಗಮ್ಮ ಹಿರೇಮಠ, ವಿಜಯಕುಮಾರ ಹಿರೇಮಠ, ಮುರುಗೇಶ ಬಡ್ನಿ, ಸಂಗಮೇಶ ಮೆಣಸಿನಕಾಯಿ, ಬಸವರಾಜ ಬ್ಯಾಹಟ್ಟಿ, ಡಾ. ಜಿ.ಎಸ್ ಹಿರೇಮಠ, ಸಂತೋಷ, ಶಿವಕುಮಾರ, ಉಮಾಪತಿ ಭೂಸನೂರಮಠ, ಬಸಯ್ಯ ನಂದಿಲಕೋಲಮಠ ಶ್ರೀಧರ ಜವಳಿ, ಆರ್. ಎಂ. ಹಿರೇಮಠ, ಪ್ರವೀಣ ಹಬೀಬ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

## ವಿಡಿಯೋ ಕಾನ್ಫರೆನ್ಸ್ ಮೂಲಕ ಬರ ನಿರ್ವಹಣೆ ಸಭೆ

# ಕುಡಿಯುವ ನೀರಿನ ಪೂರೈಕೆಗೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳಲಾಗಿದೆ: ನಲಿನ್ ಅತುಲ್

(1 ನೇ ಪುಟದಿಂದ)

ಜಿಲ್ಲೆಯ ಪಶು ಸಂಗೋಪನಾ ಇಲಾಖೆಗೆ ರೈತರಿಗೆ ಮೇವಿನ ಕಿಟ್ ನೀಡಲು ಸರ್ಕಾರದಿಂದ 26,659 ಮಿನಿ ಕಿಟ್‌ಗಳು ಸರಬರಾಜು ಆಗಿದ್ದು, ಅದರಲ್ಲಿ ಅರ್ಹ 7,651 ರೈತರಿಗೆ 19,026 ಕಿಟ್‌ಗಳನ್ನು ವಿತರಿಸಲಾಗಿರುತ್ತದೆ.

ಕುಡಿಯುವ ನೀರು ಮತ್ತು ಮೇವಿನ ಸಮಸ್ಯೆ ಕುರಿತು ಸಹಾಯವಾಣಿ: ಜಿಲ್ಲೆಯಲ್ಲಿ ರೈತರಿಗೆ ಇನ್‌ಪುಟ್ ಸಬ್ಸಿಡಿ ಡಿ.ಬಿ.ಟಿ ಮೂಲಕ ಜಮಾ ಆದ ಮಾಹಿತಿಯನ್ನು ಸಂಬಂಧಪಟ್ಟ ಗ್ರಾಮ ಪಂಚಾಯತ್ ಕಛೇರಿಯಲ್ಲಿ ಪ್ರಚುರಪಡಿಸಲಾಗಿದೆ. ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಮತ್ತು ಮೇವಿನ ಸಮಸ್ಯೆ ಕುರಿತು ಹಾಗೂ ಸರ್ಕಾರದಿಂದ ರೈತರಿಗೆ ನೀಡುವ ಇನ್‌ಪುಟ್ ಸಬ್ಸಿಡಿ ಹಣ ಖಾತೆಗೆ ಜಮಾ ಆಗದೇ ಇರುವ ಬಗ್ಗೆ ದೂರುಗಳನ್ನು ಸಲ್ಲಿಸಲು ಸಾರ್ವಜನಿಕರಿಗೆ ಅನುಕೂಲವಾಗುವಂತೆ ತಾಲೂಕು ಮತ್ತು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸಹಾಯವಾಣಿಯನ್ನು ತೆರೆಯಲಾಗಿರುತ್ತದೆ. ಇದುವರೆಗೂ 389 ದೂರುಗಳು ಸ್ವೀಕೃತವಾಗಿದ್ದು, ಅದರಲ್ಲಿ 385 ದೂರುಗಳನ್ನು ಬಗೆಹರಿಸಲಾಗಿದೆ ಇನ್ನೂ 4 ದೂರುಗಳು ಬಗೆಹರಿಸಲು ಬಾಕಿ ಇದೆ. ಸ್ವೀಕೃತವಾದ ದೂರುಗಳಲ್ಲಿ 242 ಪೈಪ್‌ಲೈನ್ ದುರಸ್ಥಿ, 106 ಕುಡಿಯುವ ನೀರು ಒದಗಿಸಲು ಮತ್ತು 41 ಮೋಟಾರ್ ದುರಸ್ಥಿ ಮಾಡಿಸಬೇಕೆಂದು ದೂರುಗಳು ಸ್ವೀಕೃತವಾಗಿರುತ್ತವೆ.ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ತಾಲ್ಲೂಕು ಕಚೇರಿಗಳಲ್ಲಿನ ಸಹಾಯವಾಣಿ ಸಂಖ್ಯೆಗಳು:ಜಿಲ್ಲಾಧಿಕಾರಿಗಳ ಕಚೇರಿ ಮೊ.ಸಂ. 7676732001, ತಾಲ್ಲೂಕು ಕಚೇರಿ, ಕೊಪ್ಪಳ ಮೊಸಂ.9380252346, ಯಲಬುರ್ಗಾ ಮೊ.ಸಂ. 9448833207, ಕುಷ್ಟಗಿ ಮೊ.ಸಂ. 9845791349, ಕನಕಗಿರಿ ಮೊ.ಸಂ.9900433012, ಕುಕನೂರು ಮೊ.ಸಂ.8050303495, ಗಂಗಾವತಿ ಮೊ.ಸಂ.97407 93877, ಕಾರಟಗಿ ಮೊ.ಸಂ.9743600343.

ಕೊಪ್ಪಳ: 08539–230192, ಭಾಗ್ಯನಗರ: 08539–230243, ಕುಕನೂರು: 8197396725, 8431363187, ಯಲಬುರ್ಗಾ: 9880524225, 9743277571, ಕುಷ್ಟಗಿ: 08536–267041, ತಾವರಗೇರಾ: 990057212, 8971014351, ಕಾರಟಗಿ: 08533–274232, ಕನಕಗಿರಿ: 8951133577, ಗಂಗಾವತಿ: 08533–230240, 8050428081.ಕೊಪ್ಪಳ ಜಿಲ್ಲೆಯ 7 ತಾಲೂಕುಗಳನ್ನು ಸರ್ಕಾರ ಬರಪೀಡಿತ ಪ್ರದೇಶವೆಂದು ಘೋಷಣೆ ಮಾಡಿದ ಹಿನ್ನೆಲೆಯಲ್ಲಿ ಯಾವುದೇ ರೀತಿಯ ಕುಡಿಯುವ ನೀರಿನ ಮತ್ತು ಮೇವಿನ ಸಮಸ್ಯೆ ಉದ್ಭವಿಸಿದರೆ ತಕ್ಷಣ ಸ್ಪಂದಿಸಲು ತಹಶೀಲ್ದಾರ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕು ಪಂಚಾಯತ್ ಇವರಿಗೆ ನಿರ್ದೇಶನ ನೀಡಲಾಗಿದೆ. ಗ್ರಾಮಮಟ್ಟದ ಮತ್ತು ತಾಲೂಕು ಮಟ್ಟದ ಟಾಸ್ಕ್‌ಫೋರ್ಸ್‌ನಲ್ಲಿ ಸಮಿತಿಯನ್ನು ರಚನೆ ಮಾಡಿಕೊಳ್ಳಲಾಗಿದೆ ಹಾಗೂ ಸದ್ಯಕ್ಕೆ ಜಿಲ್ಲೆಯಲ್ಲಿ ಬರಗಾಲ ನಿರ್ವಹಣೆಗಾಗಿ ಅನುದಾನದ ಕೊರತೆ ಇರುವುದಿಲ್ಲ.ಜಿಲ್ಲೆಯಲ್ಲಿ ಪ್ರತಿ ಮಂಗಳವಾರ ಮತ್ತು ಬುಧವಾರ ಗ್ರಾಮ ಮಟ್ಟದ ಕಾರ್ಯಪಡೆ ಮತ್ತು ಪ್ರತಿ ಗುರುವಾರ ತಾಲೂಕಾ ಮಟ್ಟದ ಕಾರ್ಯಪಡೆ ಮತ್ತು ಜಿಲ್ಲಾ ಮಟ್ಟದಲ್ಲಿ ಪ್ರತಿ ಶುಕ್ರವಾರ (ಜೂಮ್ ವಿ.ಸಿ ಮೂಲಕ) ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಆಡಳಿತಾಧಿಕಾರಿಗಳು, ಪಶು ಸಖಿ, ಕೃಷಿ ಸಖಿ ಮತ್ತು ತಾಲೂಕು ಮಟ್ಟದ ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಾಪ್ತಾಹಿಕ ಸಭೆಗಳನ್ನು ನಡೆಸಲಾಗುತ್ತಿದೆ ಮತ್ತು ಅದರ ನಡಾವಳಿಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗುತ್ತಿದೆ. ಇದರಂತೆ ಎಲ್ಲ ಅಧಿಕಾರಿಗಳು ಬರ ನಿರ್ವಹಣೆಯಲ್ಲಿ ಯಾವುದೇ ಬೇಜವಾಬ್ದಾರಿ ತೋರದೆ ಚುನಾವಣಾ ಕರ್ತವ್ಯದೊಂದಿಗೆ ಬರ ನಿರ್ವಹಣೆ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು. ಈ ಸಂದರ್ಭ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಅವರು ಉಪಸ್ಥಿತರಿದ್ದರು.

# ಜಗದೀಶ ಶೆಟ್ಟರ್ ಅವರ ಗೆಲವು ನಿಶ್ಚಿತ' –ಶಾಸಕ ಬಾಲಚಂದ್ರ ಜಾರಕಿಹೊಳಿ



ಮೂಡಲಗಿ: 'ಅರಭಾವಿ ಕ್ಷೇತ್ರದಲ್ಲಿ ಬಿಜೆಪಿ ಪಕ್ಷಕ್ಕೆ ಅತೀ ಹೆಚ್ಚು ಮತ ನೀಡಲು ಬದ್ಧರಾಗಿದ್ದು, ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಅವರ ಗೆಲವು ನಿಶ್ಚಿತವಾಗಿದೆ' ಎಂದು ಅರಭಾವಿಯ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಹೇಳಿದರು.

ಶುಕ್ರವಾರ ಸಂಜೆ ಇಲ್ಲಿಯ ಶಿವಬೋಧರಂಗ ಸೊಸೈಟಿಯ ಸಭಾಭವನದಲ್ಲಿ ಬಿಜೆಪಿ ಬೂತ್ ಮಟ್ಟದ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು ಭಾರತದ ಭವಿಷ್ಯಕ್ಕಾಗಿ ಮತ್ತು ದೇಶದ ಅಭಿವೃದ್ಧಿಗಾಗಿ ಬಿಜೆಪಿ ಅಧಿಕಾರಕ್ಕೆ ಬರುವುದು ಮತ್ತು ನರೇಂದ್ರ ಮೋದಿ ಅವರು ಪ್ರಧಾನ ಆಗುವುದು ಇಂದಿನ ಅವಶ್ಯಕತೆಯಾಗಿದೆ, ದೇಶದ ವಿವಿಧ ಆಯಾಮಗಳ ಚುನಾವಣೆಯ ಸಮೀಕ್ಷೆಯಲ್ಲಿ ಬಿಜೆಪಿ ಪಕ್ಷವು ಅತೀ ಹೆಚ್ಚು ಸ್ಥಾನಗಳಿಂದ ಮತ್ತೆ ಸರ್ಕಾರವನ್ನು ನಿರ್ಮಿಸಲಿದೆ ಎಂದು ಸಾಬೀತಾಗಿದೆ.

ಜಗದೀಶ ಶೆಟ್ಟರ ಅವರನ್ನು ಚುನಾಯಿಸುವುದರಿಂದ ಅದು ಬೆಳಗಾವಿ ಜಿಲ್ಲೆಗೆ ವರದಾನವಾಗಲಿದೆ. ಜಗದೀಶ ಶೆಟ್ಟರ್ ಅವರ ಮೂಲಕ ಜಿಲ್ಲೆಯು ಇನ್ನಷ್ಟು ಅಭಿವೃದ್ಧಿಯಾಗಲಿದೆ ಎಂದರು.

ದೇಶದ ಪಕ್ಕದ ಶತ್ರುಗಳಾದ ಪಾಕಿಸ್ತಾನ ಮತ್ತು ಚೀನಾ ರಾಷ್ಟ್ರಗಳ ಉಪಟಳವನ್ನು ಸದ್ದಡಗಿಸಲು ಮೋದಿಯಂತ ಸಮರ್ಥ ನಾಯಕ ಈ ದೇಶಕ್ಕೆ ಅವಶ್ಯ ಬೇಕು. ಭಾರತವು ಇಂದು ಮಹಾನ್ ಶಕ್ತಿಯಾಗಿ ನಿರ್ಮಾಣವಾಗಲು ನರೇಂದ್ರ ಮೋದಿಯಂತ ಪ್ರಧಾನಿಯಿಂದ ಸಾಧ್ಯವಾಗಿದೆ. ನರೇಂದ್ರ ಮೋದಿ ಅವರ ನಡೆಗೆ ಇಡೀ ಜಗತ್ತು ಭಾರತದತ್ತ ನೋಡುವಂತಾಗಿದೆ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವು ಅಭಿವೃದ್ಧಿಗೆ ಹಣ ನೀಡುತ್ತಿಲ್ಲ. ರಾಜ್ಯದಲ್ಲಿ ಅಭಿವೃದ್ಧಿಯು ಶೂನ್ಯವಾಗಿದೆ. ಕಾಂಗ್ರೆಸ್‌ಗೆ ಅಧಿಕಾರ ಕೊಟ್ಟಿದ್ದ ತಪ್ಪಿಗೆ ಜನರು ಈಗ ಶಪಿಸುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಅಪಪ್ರಚಾರಕ್ಕೆ ಕಿವಿಗೊಡಬೇಡಿ. ಚುನಾವಣೆ ಸಂದರ್ಭಕ್ಕೆ ಮಾತ್ರ ಅವರು ಕಾಣಿಸಿಕೊಳ್ಳತ್ತಾರೆ.

ದೇಶ ಸುರಕ್ಷಿತವಾಗಿರಲು, ಅಭಿವೃದ್ಧಿಯತ್ತ ಸಾಗಿಸಲು ಬಿಜೆಪಿ ಪಕ್ಷವನ್ನು ಚುನಾಯಿಸಲು ನಾವೆಲ್ಲ ಬದ್ಧರಾಗೋಣ ಎಂದು ಕರೆಕೊಟ್ಟರು.

ಇದೇ ಏ. 23ರಂದು ಅರಭಾವಿ ಕ್ಷೇತ್ರದ ಬಿಜೆಪಿ ಕಾರ್ಯಕರ್ತರ ಬೃಹತ್ ಸಮಾವೇಶವನ್ನು ಏರ್ಪಡಿಸುತ್ತಿದ್ದು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕ್ಷೇತ್ರದಿಂದ ಜಗದೀಶ ಶೆಟ್ಟರ ಅವರಿಗೆ ಅಗ್ರ ಮತ ನೀಡುವ ಮೂಲಕ ಗೆಲ್ಲಿಸಲು ಪಣತೊಡೋಣ ಎಂದರು.

ಬೆಳಗಾವಿ ಲೋಕಸಭಾ ಅಭ್ಯರ್ಥಿ ಜಗದೀಶ ಶೆಟ್ಟರ ಪತ್ನಿ ಶಿಲ್ಪಾ ಶೆಟ್ಟರ ಮಾತನಾಡಿ 'ನರೇಂದ್ರ ಮೋದಿ ಅವರು ಸಮರ್ಥ ನಾಯಕರಾಗಿದ್ದಾರೆ. ದೇಶ ಕಟ್ಟುವ ಕೆಲಸವನ್ನು ಮಾಡುತ್ತಿದ್ದಾರೆ. ಜಗತ್ತಿನಲ್ಲಿ ಭಾರತದ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಮತ್ತೊಮ್ಮೆ ನರೇಂದ್ರ ಮೋದಿ ಅವರನ್ನು ಪ್ರಧಾನಿಯನ್ನಾಗಿಸಲು ಬಿಜೆಪಿಗೆ ಮತವನ್ನು ನೀಡಬೇಕು'. ಕೋವಿಡ್‌ದಂತ ಕಾಯಲೆಯನ್ನು ಅತ್ಯಂತ ಸಮರ್ಥವಾಗಿ ನಿಭಾಯಿಸುವ ಮೂಲಕ ಪ್ರಧಾನ ನರೇಂದ್ರ ಮೋಧಿ ಅವರು ಇಡೀ ಜಗತ್ತಿಗೆ ಮಾದರಿಯೆನಿಸಿಕೊಂಡಿದ್ಧರೆ. ರೈತರ, ಮಹಿಳೆಯರ ಕಣ್ಣೀರು ಒರೆಸುವ ಕಾರ್ಯ ಮಾಡಿದ್ದಾರೆ. ಆಯೋಧ್ಯಯಲ್ಲಿ ರಾಮಮಂದಿರವನ್ನು ಸ್ಥಾಪಿಸುವ ಮೂಲಕ 500 ವರ್ಷಗಳ ಇತಿಹಾಸಕ್ಕೆ ಹೊಸ ಭಾಷೆ ಬರೆದಿದ್ದಾರೆ ಎಂದರು.

ಕೋವಿಡ್ ಸಂದರ್ಭದಲ್ಲಿ ಇಡೀ ರಾಜ್ಯಕ್ಕೆ ಆಕ್ಸಿಜನ್ ನಿರ್ವಹಿಸುವ ಜವಾಬ್ದಾರಿ ಜಗದೀಶ ಶೆಟ್ಟರ ಅವರಿಗೆ ಕೊಟ್ಟಿದ್ದು, ಅದನ್ನು ಸಮರ್ಥವಾಗಿ ನಿಭಾಯಿಸಿದ ಕೀರ್ತಿ ಅವರಿಗಿದೆ.

ಬೆಳಗಾವಿ ಜಿಲ್ಲೆಯ ಯಾವತ್ತೂ ಅಭಿವೃದ್ಧಿಗೆ ಜಗದೀಶ ಶೆಟ್ಟರ್ ಅವರಂಥ ಸಮರ್ಥ ನಾಯಕರು ಬೇಕು. ಜಗದೀಶ ಶೆಟ್ಟರ ಅವರಿಗೆ ಮತ ನೀಡಿ ಅವರನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿಕೊಂಡರು.

ವೇದಿಕೆಯಲ್ಲಿ ಬಿಜೆಪಿ ಅರಭಾವಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ, ಬಿಜೆಪಿ ಮಹಿಳಾ ಮೋರ್ಚಾದ ಇಂದಿರಾ ಅಂತರಗಟ್ಟಿ, ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯ ಗೋವಿಂದ ಕೊಪ್ಪದ, ಅರಭಾವಿ ಪ್ರಭಾರಿ ವಿಜಯ ಗುಡದರಿ ಬಸವರಾಜ ಗುಲಗಾಜಂಬಗಿ, ಅಪ್ಪಾಸಾಹೇಬ ಹೊಸಕೋಟಿ ಉಪಸ್ಥಿತರಿದ್ದರು.

ಸಿದ್ಧಣ್ಣ ದುರದುಂಡಿ ನಿರೂಪಿಸಿದರು. ಮಹಾಂತೇಶ ಕುಡಚಿ ವಂದಿಸಿದರು.

# ಮೋದಿಯವರಿಂದ ದೇಶದಲ್ಲಿ ಬದಲಾವಣೆ ಗಾಳಿ ಬೀಸುತ್ತಿದೆ : ಕ್ಯಾವಟರ್



ಕೊಪ್ಪಳ: ಪ್ರಧಾನ ಮೋದಿ ಸ್ವಚ್ಛ ಹಾಗೂ ಸುಭದ್ರ ಆಡಳಿತದಿಂದ ಭಾರತ ವಿಶ್ವಕ್ಕೆ ಮಾದರಿಯಾಗಿದೆ ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ. ಬಸವರಾಜ ಕೆ ಶರಣಪ್ಪ ಅಭಿಪ್ರಾಯಪಟ್ಟರು.

ಲೋಕಸಭಾ ಚುನಾವಣೆ ಪ್ರಚಾರ ನಿಮಿತ್ಯ ನರೇಗಲ್, ಯತ್ನಟ್ಟಿ ಹಾಗೂ ಟಣಕನಕಲ್ ಗ್ರಾಮಕ್ಕೆ ಭೇಟಿ ನೀಡಿ ಗ್ರಾಮಸ್ಥರನ್ನು ಉದ್ದೇಶಿಸಿ ಮಾತನಾಡಿದರು

ಮೋದಿಯವರ ನೇತೃತ್ವದಲ್ಲಿ ವಿಜ್ಞಾನ ತಂತ್ರಜ್ಞಾನ ಮತ್ತು ಕೃಷಿ ಕ್ಷೇತ್ರದಲ್ಲಿ ದೇಶವು ಅಭಿವೃದ್ಧಿ ಕಾಣುತ್ತಿದೆ. ಹಲವು ರೀತಿಯ ಜನಹಿತಕಾರಿ ಯೋಜನೆಗಳನ್ನು ಜಾರಿ ಮಾಡುವ ಮೂಲಕ ಸರ್ವರಿಗೂ ಸಮಪಾಲು ಎಂಬ ಉದ್ದೇಶ ವಿಟ್ಟು ಕೊಂಡು ಹತ್ತು ವರ್ಷಗಳ ಕಾಲ ಆಡಳಿತ ನಡೆಸಿದ್ದಾರೆ ಎಂದು ತಿಳಿಸಿದರು.

ಪ್ರಧಾನ ಮೋದಿಯವರ ಸ್ಪೂರ್ತಿಯಿಂದ ಸಾಮಾಜಿಕ ಕಳಕಳಿ, ಚಿಂತನೆ ಮತ್ತು ಕನಸು ಹೊತ್ತುಕೊಂಡು ರಾಜಕೀಯಕ್ಕೆ ಬಂದಿದ್ದೇನೆ. ಕ್ಷೇತ್ರದ ಸರ್ವಾಂಗೀಣ ಅಭಿವೃದ್ದಿಗೆ ಸೇವೆ ಮಾಡಲು ಅವಕಾಶ ನೀಡಬೇಕೆಂದು ಮತಯಾಚನೆ ಮಾಡಿದರು.ಜೆಡಿಎಸ್ ಮುಖಂಡ ಸಿ ವಿ ಚಂದ್ರಶೇಖರ್ ಮಾತನಾಡಿ ಮುಂದಿನ ಮಕ್ಕಳ ಕಲ್ಯಾಣ ಮತ್ತು ಭವಿಷ್ಯಕ್ಕಾಗಿ ಮೋದಿ ಅವರು ಗೆಲ್ಲಿಸಿಬೇಕು ಎಂದರು. ದೇಶದ ಭವಿಷ್ಯವನ್ನು ನಿರ್ಧರಿಸುವ ಚುನಾವಣೆ ಇದಾಗಿದೆ. ಈ ಸಂದರ್ಭದಲ್ಲಿ ಮುಖ್ಯವಾಗಿ ಯುವಕರು ಈ ಕುರಿತಾಗಿ ಹೆಚ್ಚಿನ ಚಿಂತನೆ ಅಗತ್ಯ ಎಂದು ಹೇಳಿದರು

ಕೊಪ್ಪಳ ಲೋಕಸಭಾ ಕ್ಷೇತ್ರದ ಸಂಚಾಲಕ ಪ್ರದೀಪ್ ಹಿಟ್ನಾಳ್, ಜೆಡಿಎಸ್ ಮುಖಂಡ ಸಿ ವಿ ಚಂದ್ರಶೇಖರ್, ಪಿ ಬಿ ಹಿರೇಮಠ್,ಶಿವಶಂಕರ್, ಚನ್ನಬಸವ ಗಾಳಿ, ಶಾಂತವೀರಯ್ಯ, ವಿರುಪಾಕ್ಷಗೌಡ, ರಾಜಶೇಖರ್ ಗೌಡ, ಪ್ರಭುಗೌಡ, ಗವಿಸಿದ್ದಪ್ಪ ಬಿಸರಳ್ಳಿ, ಶಿವಯೋಗಿ ಕೊಡದಾಳಸೇರಿದಂತೆ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

# ಗ್ರಾಮೀಣಾಭಿವೃದ್ಧಿ ಆಯುಕ್ತರಿಂದ ನರೇಗಾ ಕಾಮಗಾರಿಗಳ ಪರಿಶೀಲನೆ



ಕೊಪ್ಪಳ, ಏಪ್ರಿಲ್ 20 : 2023–24 ಹಾಗೂ 2024–25ನೇ ಸಾಲಿನ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ಮತ್ತು ಅನುಷ್ಠಾನಗೊಳ್ಳುತ್ತಿರುವ ಬಹದ್ದೂರಬಂಡಿ, ಬಿಸರಳ್ಳಿ, ಕೋಳೂರು ಗ್ರಾಮ ಪಂಚಾಯತಿಗಳಲ್ಲಿ ಕಾಮಗಾರಿ ಸ್ಥಳಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದ ಆಯುಕ್ತರಾದ ಪವನ್ ಕುಮಾರ್ ಮಾಲಪಾಟಿ ಅವರು ಶನಿವಾರದಂದು ಭೇಟಿ ನೀಡಿ ಕಾಮಗಾರಿಗಳ ಪರಿಶೀಲನೆ ಮಾಡಿದರು.

ಬಹದ್ದೂರಬಂಡಿ ಗ್ರಾಮ ಪಂಚಾಯತ್ ವತಿಯಿಂದ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಹೂವಿನಾಳ ರಸ್ತೆಯ ಬದಿ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕೂಲಿ ಕೆಲಸ, ಕಾರ್ಯನಿರ್ವಹಣೆ ಕುರಿತು ಪರಿಶೀಲಿಸಿದರು. ಸ್ಥಳದಲ್ಲಿದ್ದ ಕೂಲಿಕಾರರ ಜೊತೆಗೆ ಕುಟುಂಬದ ಸದಸ್ಯರು ಕೆಲಸಕ್ಕೆ ಕಳೆದ ಸಾಲಿನಲ್ಲಿ ಹಾಗು ಪ್ರಸಕ್ತದಲ್ಲಿ ಕೆಲಸ ನಿರ್ವಹಿಸಿದ ಬಗ್ಗೆ ಚರ್ಚಿಸಿದರು. ಜಾಬ್‌ಕಾರ್ಡಗಳಲ್ಲಿ ಕೂಲಿ ಕೆಲಸ ನಿರ್ವಹಿಸಿದ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಅಪಡೇಟ್ ಮಾಡತಕ್ಕದ್ದು. ಇದರಿಂದ ಕೂಲಿಕಾರರಿಗೆ ವರ್ಷದಲ್ಲಿ ಎಷ್ಟು ದಿನಗಳ ಕೂಲಿ ಕೆಲಸ ನಿರ್ವಹಿಸಿದ್ದೇವೆ ಹಾಗು ಎಷ್ಟು ಕೂಲಿ ಹಣ ಪಾವತಿಯಾಗಿದೆ ಎಂಬುದರ ಸಂಪೂರ್ಣ ಮಾಹಿತಿ ತಿಳಿಯುತ್ತದೆ. ಮೇಟ್ ಗಳು ನಿಮ್ಮ ಕೂಲಿಕಾರರಿಗೆ ಅಳತೆ ಕುರಿತು ಸರಿಯಾಗಿ ಮಾಹಿತಿ ನೀಡಿರಿ. ಇದರಿಂದ ಅವರಿಗೂ ಕೂಡಾ ಅಳತೆಯ ಬಗ್ಗೆ ತಿಳಿಯುತ್ತದೆ ಎಂದ ಅವರು, ನಾಲಾ ಹೂಳೆತ್ತುವ ಕಾಮಗಾರಿಯ ಕಡತದ ಅಂದಾಜು ಪತ್ರಿಕೆಯಲ್ಲಿ ಅಳವಡಿಸಿಕೊಂಡಿರುವ ಮಾಹಿತಿಯನ್ನು ಪರಿಶೀಲಿಸಿದರು. ಬೇಸಿಗೆ ಇರುವುದರಿಂದ ನಿರಂತರವಾಗಿ ಕೂಲಿಕಾರರಿಗೆ ಕೂಲಿ ಕೆಲಸ ಲಭ್ಯವಿದೆ. ಆ ಕಾರಣಕ್ಕಾಗಿ ಗ್ರಾಮ ಪಂಚಾಯತಿಯಿಂದ ಕ್ರಮವಹಿಸಲು ಸೂಚಿಸಿದರು. ಕಾಯಕ ಬಂಧುಗಳು ನಿರಂತರವಾಗಿ ಕಾಲ ಕಾಲಕ್ಕೆ ಮಾಹಿತಿ ನೀಡಬೇಕೆಂದು ಸೂಚಿಸಿದರು.

ಸಾಮಾಜಿಕ ಅರಣ್ಯ ಇಲಾಖೆಯಿಂದ ಬಿಸರಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬಿಸರಳ್ಳಿ ಗ್ರಾಮದಿಂದ ಬಿಕನಳ್ಳಿ ಗ್ರಾಮಕ್ಕೆ ಹೋಗುವ ರಸ್ತೆ ಬದಿ ನೆಡುತೋಪು ಅನುಷ್ಠಾನಗೊಳಿಸಿರುವ ಕಾಮಗಾರಿಯನ್ನು ವೀಕ್ಷಿಸಿದರು. ನೆಡುತೋಪುಗಳ ರಕ್ಷಣೆ ಬಹು ಮುಖ್ಯವಾದುದು. ಹೆಚ್ಚು ಹೆಚ್ಚು ನೆಡುತೋಪು ಕಾಮಗಾರಿಗಳನ್ನು ಅನುಷ್ಠಾನಸಬೇಕೆಂದು ಸೂಚಿಸಿದರು. ಬಿಕನಳ್ಳಿ ಗ್ರಾಮದ ರೈತ ಬಸವರೆಡ್ಡಿ ಬಸವರಡ್ಡೇರ ಇವರು ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಬಾಳೆ ತೋಟವನ್ನು 2023 ಜೂನ್ ನಲ್ಲಿ ಅನುಷ್ಠಾನಿಸಿದ್ದು ಅವರಿಗೆ ಕೂಲಿ, ಸಾಮಗ್ರಿ ಹಣ ಪಾವತಿಯಾಗಿರುವ ಬಗ್ಗೆ ರೈತರಿಂದ ಮಾಹಿತಿ ಪಡೆದರು. ವೈಯಕ್ತಿಕ ಸೌಲಭ್ಯ ಪಡೆಯಲು ರೂ.5.00ಲಕ್ಷ ದವರೆಗೆ ಅವಕಾಶ ಇರುವುದರಿಂದ ದಾಳಿಂಬೆ ಇತ್ಯಾದಿಗಳನ್ನು ನರೇಗಾದಡಿ ಅನುಷ್ಠಾನಿಸಿಕೊಂಡು ಆರ್ಥಿಕವಾಗಿ ಸದೃಢರಾಗಬೇಕೆಂದು ಸ್ಥಳದಲ್ಲಿದ್ದ ರೈತ ಬಸವರಡ್ಡಿಗೆ ತಿಳಿಸಿದರು. ರೈತರಿಗೆ ಅವಕಾಶ ಇರುವ ಕಡೆ ಹೆಚ್ಚು ದಾಳಿಂಬೆ ತೋಟ ನಿರ್ಮಿಸಿಕೊಳ್ಳಲು ರೈತರಿಗೆ ಪ್ರೇರಣೆ ಮಾಡಬೇಕೆಂದು ಸ್ಥಳದಲ್ಲಿ ಹಾಜರಿದ್ದ ತೋಟಗಾರಿಕೆ ಉಪನಿರ್ದೇಶಕರು ಹಾಗೂ ಹಿರಿಯ ಸಹಾಯಕ ನಿರ್ದೇಶಕರಿಗೆ ಸೂಚಿಸಿದರು.

2023–24 ಮತ್ತು 2024–25ನೇ ಸಾಲಿನಲ್ಲಿ ಕೋಳೂರು ಗ್ರಾಮ ಪಂಚಾಯತಿಯಿಂದ ಕಾಟರಳ್ಳಿ ಗ್ರಾಮದಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಿರ್ಮಿಸಲಾದ ಶೌಚಾಲಯ, ಅಡುಗೆ ಕೋಣೆ ಇತ್ಯಾದಿ ಶಾಲಾಭಿವೃದ್ಧಿ ಕಾಮಗಾರಿಗಳನ್ನು, ಸ್ಥಳದಲ್ಲಿ ಕಾಮಗಾರಿಗೆ ಬಳಕೆ ಮಾಡಿಕೊಂಡಿರುವ ಬಗ್ಗೆ ಕಡತದಲ್ಲಿನ ಐಟಂವಾರು ದಾಖಲಾತಿಯನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಆಯುಕ್ತಾಲಯದ ಜಂಟಿ ನಿರ್ದೇಶಕರಾದ( ತೋಟಗಾರಿಕೆ) ಶ್ರೀಶೈಲ ದಿಡ್ಡಿಮನ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಪ್ಪ ತೊದಲಬಾಗಿ, ತೋಟಗಾರಿಕೆ ಇಲಾಖೆಯ ಉಪನಿರ್ದೇಕರಾದ ಕೃಷ್ಣ ಉಕ್ಕುಂದ, ರಾಜ್ಯ ಯೋಜನಾ ಅಭಿಯಂತರರಾದ ಯಶವಂತ, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ನರೇಗಾ ಸಹಾಯಕ ನಿರ್ದೇಶಕ ಯಂಕಪ್ಪ, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ಶಂಕ್ರಪ್ಪ, ಸಾಮಾಜಿಕ ವಲಯ ಅರಣ್ಯಾಧಿಕಾರಿ ಗುರನಗೌಡ, ಜಿಲ್ಲಾ ಪಂಚಾಯತಿ ಎಡಿಪಿಸಿ ಮಹಾಂತಸ್ವಾಮಿ, ಜಿಲ್ಲಾ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ, ಎಂಐಎಸ್ ಸಂಯೋಜಕ ಮೈನುದ್ದೀನ್, ತಾಲೂಕ ನರೇಗಾ ಸಿಬ್ಬಂದಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ತಾಂತ್ರಿಕ ಸಹಾಯುಕರು, ಬೇರ್ ಪೂಟ್ ಟೆಕ್ನಿಷಿಯನ್‌ಗಳು, ಗ್ರಾಮ ಕಾಯಕ ಮಿತ್ರರು ಹಾಗೂ ಗ್ರಾಮ ಪಂಚಾಯತ ಸಿಬ್ಬಂದಿಗಳು ಹಾಜರಿದ್ದರು.